ಗೆ ಬಾಡಿಗೆ ಭರಿಸದ ಪಾಲಿಕೆ ಅಧೀನದ
ಗೆ ಅಧಿಕಾರಿಗಳಿಂದ ಬೀಗ

26 ಕುರಿ ಮತ್ತು ಮೇಕೆಗಳು ಕಳುವಾಗಿವೆ

ಇನ್‌ಸಿಗ್ನಿಯಾ-2017ರ ಉದ್ಘಾಟನಾ ಸಮಾರಂಭದಲ್ಲಿ ಡಾ. ಚಕ್ರವರ್ತಿ

# ಸಾಧನೆಗೆ ಸಂವಹನ ಕೌಶಲ ಮುಖ್ಯ

**ವಿಕ ಸುದ್ದಿಲೋಕ** ಧಾರವಾಡ

ಉತ್ತಮ ಸಂವಹನ ಕೌಶಲ್ಯ ಹೊಂದಿರುವ ವ್ಯಕ್ತಿ ಸಮಾಜದಲ್ಲಿ ಎಲ್ಲರ ಪ್ರೀತಿಗೂ ಪಾತ್ರನಾಗುತ್ತಾನೆ. ಸಾಧಕನಿಗೆ ಸಂವಹನ ಕೌಶಲ್ಯ ಪ್ರಮುಖ ಪಾತ್ರವಹಿಸುತ್ತದೆ ಎಂದು ಬೆಂಗಳೂರಿನ ಟಿಸಿಎಸ್ ಕಂಪನಿಯ ಮುಖ್ಯಸ್ಥ ಡಾ.ಇ.ಎಸ್. ಚಕ್ರವರ್ತಿ ಹೇಳಿದರು.

ನಗರದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಸಭಾಭವನದಲ್ಲಿ ಗುರುವಾರ ನಡೆದ ರಾಷ್ಟ್ರಮಟ್ಟದ ತಾಂತ್ರಿಕ ಮತ್ತು ಸಾಂಸ್ಕೃತಿಕ ಮೇಳ ಇನ್‌ಸಿಗ್ನಿಯಾ-2017ರ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿನ ಎಂಜನಿಯರಿಂಗ್ ವಿದ್ಯಾರ್ಥಿಗಳಿಗೆ ನಿಮಗೆ ಯಾವ ವಿಷಯ ಬೋರ್ ಎಂದು ಕೇಳಿದರೇ ಅವರು ಹೇಳುವುದು ಸಾಫ್ಟ್‌ವೇರ್ ಕ್ಷೇತ್ರವನ್ನು. ಆದರೆ, ಸಾಫ್ಟ್‌ವೇರ್ ಎಂಜಿನಿಯರಿಂಗ್ ಇಂದಿನ ಜಗತ್ತಿಗೆ ಮೂಲವಾಗುತ್ತಿದೆ. ಇನ್ಮುಂದೆ ಪ್ರತಿಯೊಂದು ಕ್ಷೇತ್ರಗಳಲ್ಲಿ ಸಾಫ್ಟ್‌ವೇರ್ ಎಂಜನಿಯರಿಂಗ್ ಇದ್ದೇ ಇರುತ್ತದೆ. ಅದನ್ನು ವಿದ್ಯಾರ್ಥಿಗಳು ಅರ್ಥ ಮಾಡಿಕೊಳ್ಳಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಸಚಿವ ಬಸವರಾಜ ಬೊಮ್ಮಾಯಿ ಮಾತನಾಡಿ, ತಂತ್ರಜ್ಞಾನ ಹಾಗೂ ಸಂಸ್ಕೃತಿಯ ಸಮ್ಮಿಲನಗೊಂಡಾಗ ಮಾತ್ರ ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರಗತಿ ಸಾಧ್ಯವಾಗುತ್ತದೆ. ಉತ್ತರ ಕರ್ನಾಟಕದ ಭಾಗಕ್ಕೆ ಎಸ್.ಡಿ.ಎಂ ಎಂಜಿನಿಯರಿಂಗ್ ಕಾಲೇಜು ಒಂದು ವರದಾನವಾಗಿದೆ ಎಂದು ಅಭಿಪ್ರಾಯಪಟ್ಟರು.

ಕೊನೆಯಲ್ಲಿ ಸುಜಯೇಂದ್ರ ಹಾಗೂ ತಂಡದವರಿಂದ ಸಂಗೀತ ಸಂಜೆ ಕಾರ್ಯಕ್ರಮ ನಡೆಯಿತು. ಎರಡು ದಿನಗಳ ಕಾಲ ನಡೆಯಲಿರುವ ಈ ಇನ್ ಸಿಗ್ನಿಯಾ-2017ರ ಉತ್ಸವದಲ್ಲಿ ವಿವಿಧ ರಾಜ್ಯಗಳಿಂದ 2000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದಾರೆಎಸ್ .ಡಿ.ಎಂ. ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ಜಿನೇಂದ್ರ ಪ್ರಸಾದ ಅಧ್ಯಕ್ಷತೆ ವಹಿಸಿದ್ದರು. ಪ್ರಾಚಾರ್ಯ ಡಾ.ಎಸ್.ಬಿ.ವಣಕುದರೆ, ಡಾ. ಕೆ. ಗೋಪಿನಾಥ, ಎಸ್.ಡಿ.ಎಂ. ಶಿಕ್ಷಣ ಸಂಸ್ಥೆಯ ಉಪ ಕಾರ್ಯದರ್ಶಿ ಜಿವಂಧರಕುಮಾರ, ಪ್ರೊ. ಮಹೇಂದ್ರ ದಿಕ್ಷೀತ್ ಮತ್ತಿತರರು ಪಾಲ್ಗೊಂಡಿದ್ದರು.

ಧನ್ಯಾ ಪಾಟೀಲ ಹಾಗೂ ತಂಡದವರು ಸ್ವಾಗತ ಗೀತೆ ಹಾಡಿದರು. ವೈಷ್ಣವಿ ಕೇಕುದಾ ಸ್ವಾಗತಿಸಿದರು. ಪ್ರೊ ವಿ.ಕೆ ಪರ್ವತಿ ವಂದಿಸಿದರು.



ಧಾರವಾಡದ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯದ ಸಭಾಭವನದಲ್ಲಿ ಗುರುವಾರ ನಡೆದ ರಾಷ್ಟ್ರಮಟ್ಟದ ತಾಂತ್ರಿಕ ಮತ್ತು ಸಾಂಸ್ಕೃತಿಕ ಮೇಳ ಇನ್‌ಸಿಗ್ನಿಯಾ-2017ನ್ನು ಮಾಜಿ ಸಚಿವ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು.

## ಚನ್ನಮ್ಮ ವಿದ್ಯಾರ್ಥಿ ನಿಲಯ ಮೆಸ್ ಗುತ್ತಿಗೆ ವಿಚಾರ